# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಫ್. ಹೆಚ್. ಜಕ್ಕಪ್ಪನವರ, ಇವರು ನಿಯಮ-72 ರಡಿ ಗಮನ ಸೆಳೆಯುವ ಸೂಚನೆಯಲ್ಲಿ " ರಾಜ್ಯದ ಕಟ್ಟಕಡೆಯ ಹಳ್ಳಿಗಳಿಗೂ ತುರ್ತು ಆರೋಗ್ಯ ಸೇವೆ ತಲುಪಿಸುವ ಉದಾತ್ತ ಉದ್ದೇಶದಿಂದ ಸರ್ಕಾರವು ಸಂಚಾರಿ ಆರೋಗ್ಯ ಘಟಕಗಳನ್ನು (MHU) ಜಾರಿಗೆ ತಂದಿದೆ. ಆದರೆ, ಪ್ರಸ್ತುತ ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಒಟ್ಟು ಘಟಕಗಳ ಸಂಖ್ಯೆ ಎಷ್ಟು ಮತ್ತು ಅವುಗಳ ಜಿಲ್ಲಾವಾರು ಹಂಚಿಕೆ ಸಮರ್ಪಕವಾಗಿದೆಯೇ ಎಂಬ ಬಗ್ಗೆ ಗೊಂದಲಗಳಿವೆ. ಈ ಪೈಕಿ ಅನೇಕ ವಾಹನಗಳು ತಾಂತ್ರಿಕ ದೋಷಗಳಿಂದಾಗಿ ಮೂಲೆಗುಂಪಾಗಿದ್ದು, ಸುಸ್ಥಿತಿಯಲ್ಲಿರುವ ಘಟಕಗಳು ಸಹ ನಿಗದಿಪಡಿಸಿದ ಗ್ರಾಮಗಳಿಗೆ ಸರಿಯಾದ ಸಮಯಕ್ಕೆ ತಲುಪುತ್ತಿಲ್ಲ ಎಂಬ ಗಂಭೀರ ದೂರುಗಳು ಕೇಳಿಬರುತ್ತಿವೆ. ನಿಯಮದ ಪ್ರಕಾರ ಪ್ರತಿ ಗ್ರಾಮದಲ್ಲಿ ಈ ಘಟಕಗಳು ಕನಿಷ್ಠ ನಿಗದಿತ ಸಮಯ ಸೇವೆ ಸಲ್ಲಿಸಬೇಕಿದ್ದರೂ, ಕೇವಲ ದಾಖಲೆಗಳಲ್ಲಿ ಮಾತ್ರ ಭೇಟಿ ನೀಡಿ ಸಾರ್ವಜನಿಕರ ಕಣ್ಣಿಗೆ ಮಣ್ಣೆರಚಲಾಗುತ್ತಿದೆ. ಇದಕ್ಕೆ ಪೂರಕವಾಗಿ, ಈ ಸಂಚಾರಿ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರು, ನರ್ಸ್‌ಗಳು ಮತ್ತು ಲ್ಯಾಬ್ ಟೆಕ್ನಿಷಿಯನ್‌ಗಳ ತೀವ್ರ ಕೊರತೆಯಿದೆ. ಇದರಿಂದಾಗಿ ಬಡ ರೋಗಿಗಳು ತುರ್ತು ಚಿಕಿತ್ಸೆಗಾಗಿ ಮೈಲಿಗಟ್ಟಲೆ ನಡೆದು ಖಾಸಗಿ ಆಸ್ಪತ್ರೆಗಳನ್ನು ಅವಲಂಬಿಸುವಂತಾಗಿದೆ. ಕಳೆದ ಮೂರು ವರ್ಷಗಳಲ್ಲಿ ಈ ಘಟಕಗಳ ನಿರ್ವಹಣೆ ಮತ್ತು ಸಿಬ್ಬಂದಿಗಳ ವೇತನಕ್ಕಾಗಿ ಬಿಡುಗಡೆಯಾದ ಕೋಟ್ಯಂತರ ರೂಪಾಯಿ ಅನುದಾನವು ಸಮರ್ಪಕವಾಗಿ ಬಳಕೆಯಾಗದೆ ದುರುಪಯೋಗವಾಗುತ್ತಿರುವ ಸಂಶಯವಿದ್ದು, ಈ ವ್ಯವಸ್ಥೆಯನ್ನು ಸರಿಪಡಿಸಲು ಸರ್ಕಾರವು ಕೈಗೊಂಡಿರುವ ಕಟ್ಟುನಿಟ್ಟಿನ ಕ್ರಮಗಳೇನು ಮತ್ತು ಈ ಯೋಜನೆಯನ್ನು ಹಳ್ಳಿಯ ಜನರಿಗೆ ತಲುಪಿಸಲು ರೂಪಿಸಿರುವ ತುರ್ತು ಕ್ರಿಯಾಯೋಜನೆಯ ಬಗ್ಗೆ" ಪ್ರಸ್ತಾಪಿಸಿದ್ದಾರೆ.

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ:-**

ಆರೋಗ್ಯ ಸೇವೆಗಳಿಂದ ವಂಚಿತರಾದ ದುರ್ಗಮ ಪ್ರದೇಶ, ಗುಡ್ಡಗಾಡು ಪ್ರದೇಶ, ಅಸಮರ್ಪಕ ಸಾರಿಗೆ ವ್ಯವಸ್ಥೆಯಿಂದ ವಂಚಿತವಾದ ಪ್ರದೇಶಗಳು, ಆರೋಗ್ಯ ಸಂಸ್ಥೆಗಳಿಂದ ದೂರವಿರುವ ಪ್ರದೇಶಗಳು, ಆರೋಗ್ಯ ಸಂಸ್ಥೆಗಳ ವ್ಯಾಪ್ತಿಯಲ್ಲಿ 50,000 ಕ್ಕಿಂತ ಹೆಚ್ಚಿನ ಜನಸಂಖ್ಯೆ ಇರುವ ಪ್ರದೇಶಗಳು, ಪರಿಶಿಷ್ಟ ಜಾತಿ ಮತ್ತು ಪಂಗಡದವರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ, ಪ್ರಾಥಮಿಕ ಆರೋಗ್ಯ ಸೇವೆಗಳನ್ನು ನೀಡುವ ಉದ್ದೇಶಗಳಿಂದ ಸಂಚಾರಿ ಆರೋಗ್ಯ ಘಟಕಗಳನ್ನು ಪ್ರಾರಂಭಿಸಲಾಗಿದೆ.

ರಾಜ್ಯದಲ್ಲಿ ಆರೋಗ್ಯ ಉಪ ಕೇಂದ್ರಗಳನ್ನು ಆಯುಷ್ಮಾನ್ ಆರೋಗ್ಯ ಮಂದಿರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದ್ದು, ಸದರಿ ಕೇಂದ್ರಗಳಿಗೆ ಸಮುದಾಯ ಆರೋಗ್ಯ ಅಧಿಕಾರಿಗಳನ್ನು ನೇಮಿಸಿ ಪ್ರಾಥಮಿಕ ಸೇವೆಗಳನ್ನು ಕೆಳ ಹಂತದ ಹಾಗೂ ದುರ್ಗಮ ಪ್ರದೇಶ, ಗುಡ್ಡಗಾಡು ಪ್ರದೇಶ, ಅಸಮರ್ಪಕ ಸಾರಿಗೆ ವ್ಯವಸ್ಥೆಯಿಂದ ವಂಚಿತವಾದ ಪ್ರದೇಶಗಳು, ಆರೋಗ್ಯ ಸಂಸ್ಥೆಗಳಿಂದ ದೂರವಿರುವ ಪ್ರದೇಶಗಳು,  ಎಲ್ಲಾ ವರ್ಗದ ಜನರಿಗೆ ಆರೋಗ್ಯ ಸೇವೆಯನ್ನು ನೀಡಲಾಗುತ್ತಿದ್ದು, ಹೆಚ್ಚುವರಿ ಸಂಚಾರಿ ಆರೋಗ್ಯ ಘಟಕಗಳ ಮುಖಾಂತರ ಪ್ರಾಥಮಿಕ ಆರೋಗ್ಯ ಸೇವೆಯನ್ನು ನೀಡಲಾಗುತ್ತಿದೆ.

**ಸಂಚಾರಿ ಆರೋಗ್ಯ ಘಟಕಗಳನ್ನು ಈ ಕೆಳಕಂಡ ಮಾನದಂಡಗಳನ್ವಯ ಹಂಚಿಕೆ ಮಾಡಲಾಗಿದೆ.**

- ಪ್ರಧಾನ ಮಂತ್ರಿ ಜನ ಜಾತಿ  ಆದಿವಾಸಿ ನ್ಯಾಯ ಮಹಾ ಅಭಿಯಾನ (PM-JANMAN) ವು ರಾಜ್ಯದ ಐದು ಜಿಲ್ಲೆಗಳ ವ್ಯಾಪ್ತಿಯಲ್ಲಿ ವಾಸವಿರುವ ಜೇನು ಕುರುಬ ಮತ್ತು ಕೊರಗ ಜನಾಂಗದ ಸರ್ವತೋಮುಖ ಅಭಿವೃದ್ಧಿಗೆ ಆರೋಗ್ಯ ಕ್ಷೇತ್ರದಲ್ಲಿ ಸಂಚಾರಿ ಆರೋಗ್ಯ ಘಟಕಗಳ ಕಾರ್ಯಾಚರಣೆಯ ಮುಖೇನ ಪ್ರಾಥಮಿಕ ಆರೋಗ್ಯ ಆರೈಕಾ ಸೇವೆಗಳನ್ನು ನೀಡುವ ಆಶಯವನ್ನು ಹೊಂದಿದೆ. ಇದರನ್ವಯ ತಾಲ್ಲೂಕುಗಳನ್ನು ಆಯ್ಕೆ ಮಾಡಲಾಗಿದೆ.
- ದರ್ತಿ ಅಭಾ- ಜನ ಜಾತೀಯ ಗ್ರಾಮ ಉತ್ಕರ್ಷ ಅಭಿಯಾನ (DA-JGUA) ದಡಿಯಲ್ಲಿ ಒಟ್ಟು ಜನಸಂಖ್ಯೆಯಲ್ಲಿ ಶೇ.5 0 ಕ್ಕಿಂತ ಹೆಚ್ಚು ಪರಿಶಿಷ್ಟ ಪಂಗಡದ ಜನಸಂಖ್ಯೆ ಇರುವ ಗ್ರಾಮಗಳು / ಜನವಸತಿ

ಪ್ರದೇಶಗಳಲ್ಲಿನ ಪರಿಶಿಷ್ಟ ಪಂಗಡದ ಸಮುದಾಯಕ್ಕೆ ಪ್ರಾಥಮಿಕ ಆರೋಗ್ಯ ಸೇವೆಗಳನ್ನು ಸಂಚಾರಿ ಆರೋಗ್ಯ ಘಟಕಗಳ ಮುಖೇನ ನೀಡುವ ಉದ್ದೇಶವನ್ನು ಹೊಂದಲಾಗಿದ್ದು, ಇದರನ್ವಯ ಸಂಚಾರಿ ಆರೋಗ್ಯ ಘಟಕಗಳನ್ನು ನಿಗದಿಪಡಿಸಲಾಗಿದೆ.

- ದುರ್ಗಮ ಮತ್ತು ಸಂಪರ್ಕ ರಹಿತ ಪ್ರದೇಶಗಳು, ಸಾರ್ವಜನಿಕ ಆರೋಗ್ಯ ಸಂಸ್ಥೆಗಳಿಂದ ದೂರವಿರುವ, ಸೂಕ್ತವಾದ ಸಂಪರ್ಕ ವ್ಯವಸ್ಥೆಯಿಲ್ಲದ, ದುರ್ಗಮ ಜನವಸತಿ ಪ್ರದೇಶಗಳು ಪ್ರಾಥಮಿಕ ಆರೋಗ್ಯ ಕೇಂದ್ರದ ಜನಸಂಖ್ಯೆಯು 50,000 ಕ್ಕಿಂತ ಹೆಚ್ಚಿರುವ ಆಯ್ದ ಸ್ಥಳಗಳನ್ನು ಗುರುತಿಸಿ ಸಂಚಾರಿ ಆರೋಗ್ಯ ಘಟಕಗಳನ್ನು ಹಂಚಿಕೆ ಮಾಡಲಾಗಿದೆ.
- ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಮೀಸಲು ಕ್ಷೇತ್ರಗಳಲ್ಲಿ ಜನಸಂಖ್ಯೆಯು ಆಧಾರದ ಮೇಲೆ ಸಂಚಾರಿ ಆರೋಗ್ಯ ಘಟಕಗಳ ಹಂಚಿಕೆಯನ್ನು ಮಾಡಲಾಗಿದೆ.
- ಸಂಚಾರಿ ಆರೋಗ್ಯ ಘಟಕಗಳನ್ನು ಹಂಚಿಕೆ ಮಾಡಲಾಗಿರುವ ಪ್ರದೇಶಗಳಲ್ಲಿ ಸದರಿ ಸಂಚಾರಿ ಆರೋಗ್ಯ ಘಟಕಗಳೊಂದಿಗೆ ಸಂಬಂಧಪಟ್ಟ ಸಮುದಾಯ ಆರೋಗ್ಯ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆಯರು ಪ್ರತಿ ವಾರ ಈ ಪ್ರದೇಶಗಳಿಗೆ ನಿಗದಿತ ದಿನದಂದು ಭೇಟಿ ನೀಡಿ ಆರೋಗ್ಯ ಸೇವೆಗಳನ್ನು ಕಡ್ಡಾಯವಾಗಿ ನೀಡಲು ಸಹ ಸೂಚಿಸಲಾಗಿದೆ.

ಪ್ರಸ್ತುತ ರಾಜ್ಯಾದ್ಯಂತ 81 ಸಂಚಾರಿ ಆರೋಗ್ಯ ಘಟಕಗಳು ಕಾರ್ಯನಿರ್ವಹಿಸುತ್ತಿದ್ದು, ಜಿಲ್ಲಾವಾರು ಹಂಚಿಕೆ ಮಾಡಲಾಗಿರುತ್ತದೆ.

ಸಂಚಾರಿ ಆರೋಗ್ಯ ಘಟಕಗಳ ಸೇವೆಗೆ ಅಗತ್ಯ ವಾಹನಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನಿಯಮಾನುಸಾರ ಜಿಲ್ಲಾ ಹಂತದಲ್ಲಿ ಪಡೆಯಲಾಗಿದೆ ಹಾಗೂ ನಿಯಮಾನುಸಾರ ಟೆಂಡರ್ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಂತೆ ವಾಹನ ಸರಬರಾಜುದಾರರೊಂದಿಗೆ ಒಡಂಬಡಿಕೆಯನ್ನು ಮಾಡಿಕೊಂಡು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಮುಖಾಂತರ ಅಗತ್ಯ ಮೇಲ್ವಿಚಾರಣೆಯನ್ನು ಮಾಡಲಾಗುತ್ತಿದೆ. ಸುಸಜ್ಜಿತ ವಾಹನವೆಂಬುದನ್ನು ಖಾತರಿ ಪಡಿಸಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ.

ಈ ಎಲ್ಲಾ ಸಂಚಾರಿ ಆರೋಗ್ಯ ಘಟಕಗಳ ವಾಹನಗಳಿಗೆ ಜಿ.ಪಿ.ಎಸ್ ಉಪಕರಣಗಳನ್ನು ಕಡ್ಡಾಯಗೊಳಿಸಲಾಗಿದ್ದು, ಎಲ್ಲಾ ಸಂಚಾರಿ ಆರೋಗ್ಯ ಘಟಕಗಳನ್ನು ಕೇಂದ್ರ ಸರ್ಕಾರದ ಘಟಿ ಶಕ್ತಿ ಪೋರ್ಟಲ್‌ನಲ್ಲಿ ಮ್ಯಾಪ್ ಮಾಡಲಾಗಿ, ಚಲನವಲನಗಳನ್ನು ಮೇಲ್ವಿಚಾರಣೆ ಮಾಡಲಾಗುತ್ತಿದೆ.

ಜಿಲ್ಲಾ ಆರೋಗ್ಯ ಸಂಘದ ಮುಖಾಂತರ ಸಂಚಾರಿ ಆರೋಗ್ಯ ಘಟಕಗಳಿಗೆ ಮಾನವ ಸಂಪನ್ಮೂಲಗಳನ್ನು ಒದಗಿಸಲು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ಸಂಚಾರಿ ಆರೋಗ್ಯ ಘಟಕಗಳ ಆಯ್ಕೆ ಸಮಿತಿ ರಚಿಸಲಾಗಿದೆ. ಆಯ್ಕೆ ವಿಧಾನ, ಷರತ್ತು ಮತ್ತು ನಿಬಂಧನೆಗಳಿಗೆ ಸಂಬಂಧಿಸಿದಂತೆ ಮಾರ್ಗಸೂಚಿಯನ್ನು ಸಹ ಹೊರಡಿಸಲಾಗಿದೆ. ಇದರನ್ವಯ ಬಡ ರೋಗಿಗಳ ತುರ್ತು ಚಿಕಿತ್ಸೆಯನ್ನು ನೀಡಲು ಸೂಕ್ತ ನೇಮಕಾತಿ ಪ್ರಕ್ರಿಯೆ ನಡೆಸಿ ಸೇವೆ ಒದಗಿಸಲು ಕ್ರಮ ವಹಿಸಲಾಗಿದೆ.

ಸಂಚಾರಿ ಆರೋಗ್ಯ ಘಟಕಗಳ ಸೇವೆಯನ್ನು 19 ನೇ ಡಿಸೆಂಬರ್ 2025 ರಿಂದ ಪ್ರಾರಂಭಿಸಲಾಗಿದ್ದು, ಈ ಹಿಂದಿನ ಮೂರು ವರ್ಷಗಳಲ್ಲಿ ಸಂಚಾರಿ ಆರೋಗ್ಯ ಘಟಕಗಳ ಸೇವೆಯು ಒದಗಿಸದಿರುವುದರಿಂದ ಯಾವುದೇ ಅನುದಾನ ದುರುಪಯೋಗವಾಗಿರುವುದಿಲ್ಲ.

ಸಂಚಾರಿ ಆರೋಗ್ಯ ಘಟಕಗಳ ಸೇವೆಯನ್ನು ನೀಡುವ ಕುರಿತಾಗಿ ಸವಿವರವಾದ ಮಾರ್ಗಸೂಚಿಯನ್ನು ಹೊರಡಿಸಲಾಗಿದ್ದು, ಪ್ರತಿ ಸಂಚಾರಿ ಆರೋಗ್ಯ ಘಟಕಗಳು ನಿಗದಿತ ದಿನದಂದು ಬೆಳಿಗ್ಗೆ ಒಂದು ಹಳ್ಳಿಗೆ ಹಾಗೂ ಮಧ್ಯಾಹ್ನ ಒಂದು ಹಳ್ಳಿಗೆ ತೆರಳಿ ಸೇವೆ ಒದಗಿಸಲು ಕ್ರಿಯಾ ಯೋಜನೆಯನ್ನು ತಯಾರಿಸಿ ಹಾಗೂ ಸದರಿ

ಕಾರ್ಯಕ್ರಮದ ಮೇಲ್ವಿಚಾರಣೆಯನ್ನು ನಡೆಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಅಧೀನದಲ್ಲಿ ಕರ್ತವ್ಯ ನಿರ್ವಹಿಸುವ ಕಾರ್ಯಕ್ರಮಾಧಿಕಾರಿಯನ್ನು ಸದರಿ ಕಾರ್ಯಕ್ರಮದ ಮೇಲ್ವಿಚಾರಣೆಗೆ ನೇಮಿಸಲಾಗಿದೆ. ಸೇವೆಯಲ್ಲಿ ಯಾವುದೇ ಅಡಚಣೆ ಹಾಗೂ ತೊಂದರೆಯಾಗದಂತೆ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.

Digitally signed by
Dinesh Gundu Rao
Date: 16-03-2026
15:14:35

(ದಿನೇಶ್ ಗುಂಡೂರಾವ್)

ಆಕುಕ 60 ಎಸ್‌ಬಿವಿ 2026

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು